# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Faya Renewables and Power Projects Private Limited ಕಂಪನಿಗೆ ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 14 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಪತ್ರ ಸಂಖ್ಯೆ: ಇಎನ್ 278 ಎನ್‌ಸಿಇ 2016 ದಿನಾಂಕ:09.11.2016.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: 1255-A.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ M/s Faya Renewables and Power Projects Private Limited ಕಂಪನಿಗೆ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ಏಕ ಕಡತ ಪದ್ಧತಿಯಡಿಯಲ್ಲಿ M/s Faya Renewables and Power Projects Private Limited ಕಂಪನಿಗೆ ಈಗಾಗಲೇ ಹಂಚಿಕೆ ಮಾಡಲಾದ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 14 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತಂತೆ ವಿವರವಾದ ಯೋಜನಾ ವರದಿಯನ್ನು ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡುವುದಾಗಿ ತಿಳಿಸಿ ಯೋಜನೆಯ ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದಂತೆ ಡಿಪಿಆರ್ ಶುಲ್ಕವನ್ನು ಜಿಎಸ್‌ಟಿ.ಯೊಂದಿಗೆ ಪಾವತಿಸಿರುವುದನ್ನು ಪರಿಶೀಲಿಸಿದ್ದು, M/s Faya Renewables and Power Projects Private Limited ಕಂಪನಿಯು ದಿನಾಂಕ: 31.08.2015 ರಂದು Registrar of Companies, Ministry of Corporate Affairs, Government of India, Bangalore ಇವರಲ್ಲಿ ದಿನಾಂಕ: 13.08.2015 ರಂದು CIN ಸಂಖ್ಯೆ No.U40104KA2015PTC082228 ರನ್ವಯ ನೋಂದಣಿಯಾಗಿರುತ್ತದೆ. ಸದರಿ ಕಂಪನಿಯು M/s Fiza Developer and Infrastructure Private Limited ಕಂಪನಿಯು ಅಂಗ ಸಂಸ್ಥೆಯಾಗಿದ್ದು, ಇದರ ನೆಟ್‌ವರ್ತ್ ದಿನಾಂಕ: 31.03.2017 ರ ಅಂತ್ಯಕ್ಕೆ ರೂ.189.92 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ರವರು ದೃಢೀಕರಣ ಪತ್ರವನ್ನು ನೀಡಿರುತ್ತಾರೆ ಹಾಗೂ ಬ್ಯಾಲೆನ್ಸ್ ಶೀಟ್‌ಗಳನ್ನು ಸಲ್ಲಿಸಿರುತ್ತಾರೆ. ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ M/s Faya Renewables and Power Projects Private Limited ಕಂಪನಿಗೆ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ 14 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಶಿಫಾರಸ್ಸು ಮಾಡಿರುತ್ತಾರೆ.

....2)

Geographical area description for 14 MW capacity Wind power Project of M/s Faya Renewables and Power Projects Private Limited

| SL No. | Geographical area description of the project | Near by villages of the proposed area and district. | Sanctioned capacity in MW | Enhancement proposed in MW | Total capacity in MW |
|---|---|---|---|---|---|
| 1 | The proposed area is a ground level plain and has presence of cross roads and National Highway 13. Area does not have significant peaks and mostly it is a private land and has agriculture activities. The average elevation of the area varies from 590M to 615Mtrs. The area is held in the following Geographical co-ordinates as:<br>Latitude: 16°36'49" - 16°38'5.2"N<br>Longitude: 75°50'0" - 75°53'38"E<br>Peaks: 594, 590, 606, 612 and 615m AMSL<br>Toposheet No: 47 P / 14 | Nandihal and Yarnal Villages of Basavanabagewadi Taluk, Bijapur District. | 10MW | 4 MW | 14 MW (7 Nos x 2000 kw) |

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 216 ಎನ್‌ಸಿಇ 2018, ಬೆಂಗಳೂರು, ದಿನಾಂಕ: 24.05.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Faya Renewables and Power Projects Private Limited ಕಂಪನಿಗೆ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೂರನೇ ಮಾರಾಟ ಮಾಡುವ ಸಲುವಾಗಿ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ 14 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹೆಚ್ಚಿಸಿ ಆದೇಶಿಸಲಾಗಿದೆ.

Geographical area description for 14 MW capacity Wind power Project of M/s Faya Renewables and Power Projects Private Limited

| SL No. | Geographical area description of the project | Near by villages of the proposed area and district. | Sanctioned capacity in MW | Enhancement proposed in MW | Total capacity in MW |
|---|---|---|---|---|---|
| 1 | The proposed area is a ground level plain and has presence of cross roads and National Highway 13. Area does not have significant peaks and mostly it is a private land and has agriculture activities. The average elevation of the area varies from 590M to 615Mtrs. The area is held in the following Geographical co-ordinates as:<br>Latitude: 16°36'49" - 16°38'5.2"N<br>Longitude: 75°50'0" - 75°53'38"E<br>Peaks: 594, 590, 606, 612 and 615m AMSL<br>Toposheet No: 47 P / 14 | Nandihal and Yarnal Villages of Basavanabagewadi Taluk, Bijapur District. | 10MW | 4 MW | 14 MW (7 Nos x 2000 kw) |

....3)

ಷರತ್ತುಗಳು

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಉಳಿದಂತೆ ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ: ಇಎನ್ 278 ಎನ್‌ಸಿಇ 2016 ದಿನಾಂಕ: 09.11.2016 ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

24/05/2018

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

....4)

ಪ್ರತಿ:

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

7 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ

8 ಜಿಲ್ಲಾಧಿಕಾರಿ, ವಿಜಯಪುರ ಜಿಲ್ಲೆ, ವಿಜಯಪುರ.

9 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.

10 ಉಪ ಅರಣ್ಯ ಸಂರಕ್ಷಣಾಧಿಕಾರಿ, ವಿಜಯಪುರ ಪ್ರಾದೇಶಿಕ ವಿಭಾಗ, ವಿಜಯಪುರ.

11 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

12 M/s Faya Renewables and Power Projects private Limited., No.25/1, Residency Road, Bnagalore-560 025.

13 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

14 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

15 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.